ಈ) ಮೇಲಿನ ಕಲಮ್(ಅ)ಗೆ ನೀಡಿರುವ ಉತ್ತರ ದಿಂದಾಗಿ ಇದು ಉದ್ಭವಿಸುವುದಿಲ್ಲ.

ಉ) ಭಾರತೀಯ ವಿಮಾನ ಪ್ರಾಧಿಕಾರ ಖಾಸಗಿ ಬಂಡವಾಳ ತೊಡಿಸುವ ಉದ್ಯಮಗಳು ಖರ್ಚು ಮಾಡುತ್ತಾರೆ.

ಊ) ಭಾರತ ಸರ್ಕಾರವು ಮೇಲಿನ ವಿಮಾನ ನಿಲ್ದಾಣಗಳ ಅಭಿವೃದ್ಧಿಪಡಿಸಲು ತಮ್ಮ ಸಹಮತಿ ನೀಡಿರುತ್ತಾರೆ. ವಿಮಾನಗಳ ಹಾರಾಟವನ್ನು ಸಂಬಂಧಪಟ್ಟ ಏರ್‌ಲೈನ್ಸ್ ಸಂಸ್ಥೆಯವರು ನಿರ್ವಹಿಸುತ್ತಾರೆ.

ಬೆಂಗಳೂರು ನಗರದಲ್ಲಿ ಕಲಬೆರೆಕೆ ಪೆಟ್ರೋಲ್ ಮಾರಾಟ

1425 (1639) ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ನಗರದಲ್ಲಿರುವ ಪೆಟ್ರೋಲ್ ಬಂಕ್‌ಗಳೆಷ್ಟು?

ಆ) ಈ ಪೆಟ್ರೋಲ್ ಬಂಕ್‌ಗಳಲ್ಲಿ ಪ್ರತಿದಿನ ಖರ್ಚು ಆಗುತ್ತಿರುವ ಪೆಟ್ರೋಲ್ ಮತ್ತು ಡೀಸೆಲ್ ಪ್ರಮಾಣವೆಷ್ಟು?

ಇ) ಕೆಲವು ಪೆಟ್ರೋಲ್ ಬಂಕ್‌ಗಳಲ್ಲಿ ಕಲಬೆರೆಕೆ ಪೆಟ್ರೋಲ್ ಹಾಗೂ ಡೀಸೆಲ್ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಸರ್ಕಾರ ಇದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು?

ಉ) ಬೆಂಗಳೂರು ನಗರದಲ್ಲಿ ಲೈಸೆನ್ಸ್ ಇಲ್ಲದೆ ಪೆಟ್ರೋಲ್ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

ಅ) 159

ಆ) 650 ಕೆ.ಎಲ್. ಪೆಟ್ರೋಲ್ .730 ಕೆ.ಎಲ್. ಡೀಸೆಲ್

ಇ) ಬಂದಿದೆ.

ಈ) 1998ರ ಕೇಂದ್ರ ಸರ್ಕಾರದ ಆದೇಶದ ಮೇರೆಗೆ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಪೋಲೀಸ್ ಇಲಾಖೆ ಹಾಗೂ ತೈಲ ಕಂಪನಿಗಳ ಅಧಿಕಾರಿಗಳು ಜೊತೆಯಾಗಿ ಪೆಟ್ರೋಲ್ ಬಂಕ್‌ಗಳ ಅನಿರೀಕ್ಷಿತ ತನಿಖೆ ನಡೆಸಿ, ದಾಸ್ತಾನು ವ್ಯತ್ಯಾಸ ಹಾಗೂ ಕಲಬೆರೆಕೆ ಅವ್ಯವಹಾರಗಳನ್ನು ತಡೆಗಟ್ಟಲು ತೀವ್ರಕರ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

ಉ) ಬಂದಿದೆ.

ಊ) ಇಂತಹ ಮಾರಾಟ ಮಾಡುವವರ ವಿರುದ್ಧ ಪೋಲೀಸ್ ಇಲಾಖೆ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಗಳು ಜಂಟಿಯಾಗಿ ತಪಾಸಣೆ ನಡೆಸಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.